## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 85 (842) |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : | 10-03-2026 |

*****

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ನಗರದಲ್ಲಿನ ಯುವಕ/ ಯುವತಿಯರು ನಿರುದ್ಯೋಗ ಸಮಸ್ಯೆಯಿಂದಾಗಿ ಬೆಂಗಳೂರು, ಮೈಸೂರು, ಹುಬ್ಬಳ್ಳಿ, ಗೋವಾ, ಮಹಾರಾಷ್ಟ್ರ ಮುಂತಾದ ಸ್ಥಳಗಳಿಗೆ ವಲಸೆ ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಈ ಭಾಗದ ಜನರು ವಿವಿಧ ಕಾರಣಗಳಿಂದ ವಲಸೆ ಹೋಗುತ್ತಿರುವುದು ಗಮನಕ್ಕೆ ಬಂದಿದೆ. |
| ಆ) | ಸಿಂಧನೂರು ತಾಲ್ಲೂಕಿನಲ್ಲಿ 'ಜವಳಿ ಪಾರ್ಕ್' ಅನ್ನು ಸ್ಥಾಪಿಸಿದಲ್ಲಿ ಹಲವಾರು ಯುವಕ/ ಯುವತಿಯವರಿಗೆ ಉದ್ಯೋಗಾವಕಾಶ ದೊರಕುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಹೌದು |
| ಇ) | ಬಂದಿದ್ದಲ್ಲಿ, ಸಿಂಧನೂರಿನಲ್ಲಿ 'ಜವಳಿ ಪಾರ್ಕ್' ಸ್ಥಾಪಿಸುವ ಪ್ರಸ್ತಾವನೆ ಯಾವ ಹಂತದಲ್ಲಿದೆ: (ಮಾಹಿತಿ ನೀಡುವುದು) | ಜವಳಿ ಪಾರ್ಕ್ ಸ್ಥಾಪನೆಯ ಸಂಬಂಧ ಅಗತ್ಯವಿರುವ ಕನಿಷ್ಠ 15 ಎಕರೆ ಜಮೀನನ್ನು ಗುರುತಿಸಿ ಇಲಾಖೆಯ ಹೆಸರಿಗೆ ಹಸ್ತಾಂತರಿಸಲು ತಹಶೀಲ್ದಾರರು, ಕಂದಾಯ ಇಲಾಖೆ, ಸಿಂಧನೂರು ತಾಲ್ಲೂಕು ಇವರಿಗೆ ಪತ್ರ ಬರೆಯಲಾಗಿದ್ದು, ಜಮೀನಿನ ಮಂಜೂರಾತಿಯನ್ನು ನಿರೀಕ್ಷಿಸಲಾಗಿದೆ. |
| ಈ) | ಸಿಂಧನೂರು ತಾಲ್ಲೂಕಿನಲ್ಲಿ ಸಿ.ಎಸ್.ಎಫ್ ನ ಸುಮಾರು 7500 ಎಕರೆ ಭೂಮಿ ಲಭ್ಯವಿದ್ದು ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಸರ್ಕಾರದಿಂದ 'ಜವಳಿ ಪಾರ್ಕ್' ಅನ್ನು ಸ್ಥಾಪಿಸಲಾಗುವುದು? (ಮಾಹಿತಿ ನೀಡುವುದು) | ಸಿಂಧನೂರು ತಾಲ್ಲೂಕಿನಲ್ಲಿ ಒಂದೇ ಕಡೆ 15 ಎಕರೆಯಷ್ಟು ಸರ್ಕಾರಿ ಜಮೀನು ಲಭ್ಯವಿರುವುದಿಲ್ಲ. ಆದರೆ ಸಿಂಧನೂರು ತಾಲ್ಲೂಕಿನಲ್ಲಿ ಕೇಂದ್ರ ಸರ್ಕಾರದ ಅಧೀನದಲ್ಲಿರುವ CSF (Central Seeds Form) ರಲ್ಲಿ ಸುಮಾರು 7,500 ಎಕರೆಯಷ್ಟು ಭೂಮಿ ಲಭ್ಯವಿದ್ದು, ಸದರಿ ಜಮೀನನ್ನು ಇಲಾಖೆಗೆ ಮಂಜೂರು ಮಾಡಿದ್ದಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ನಿಯಮಾನುಸಾರ ಪರಿಶೀಲಿಸಲಾಗುವುದು. |

ಸಂಖ್ಯೆ: **CI 52 JAKE 2026**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ
ಕೃಷಿ ಮಾರುಕಟ್ಟೆ ಸಚಿವರು